155 ಶೇಷ = 13
4RK
ಡಿ-72

ವಿಧಾನ ಪರಿಷತ್ ಸದಸ್ಯರಾದ ಮಾನ್ಯ ಶ್ರೀ ಡಾ:ಧನಂಜಯ ಸರ್ಜಿ ಇವರು ನಿಯಮ 72ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ.

ವಿಷಯ:-

ಸರ್ಕಾರಿ ಪ್ರಾಥಮಿಕ, ಪ್ರೌಢ ಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ಹತ್ತಾರು ವರ್ಷಗಳಿಂದ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಶಿಕ್ಷಕರು ಹಾಗೂ ಉಪನ್ಯಾಸಕರ ಗೌರವಧನ ಹೆಚ್ಚಳ ಹಾಗೂ ಸೇವಾ ಖಾಯಂಮಾತಿ ಹಾಗೂ ಇನ್ನಿತರ ಸಮಸ್ಯೆಗಳ ಕುರಿತು.

ಉತ್ತರ:

ರಾಜ್ಯದ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆ/ಪದವಿಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಬೋಧಕ ಹುದ್ದೆಗಳಿಗೆದುರಾಗಿ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಶೈಕ್ಷಣಿಕ ಅವಧಿಯವರೆಗೆ ಅಥವಾ ನೇರ ನೇಮಕಾತಿಯಿಂದ ಖಾಲಿ ಹುದ್ದೆಗಳನ್ನು ಭರ್ತಿ ಮಾಡುವವರೆಗೆ ಅತಿಥಿ ಶಿಕ್ಷಕರು/ಅತಿಥಿ ಉಪನ್ಯಾಸಕರನ್ನು ತಾತ್ಕಾಲಿಕವಾಗಿ ನೇಮಕ ಮಾಡಲಾಗಿದೆ.

| ಪ್ರಾಥಮಿಕ ಶಾಲಾ ಅತಿಥಿ ಶಿಕ್ಷಕರಿಗೆ ಗೌರವ ಸಂಭಾವನೆ | ಪ್ರೌಢ ಶಾಲಾ ಅತಿಥಿ ಶಿಕ್ಷಕರಿಗೆ ಗೌರವ ಸಂಭಾವನೆ | ಪದವಿಪೂರ್ವ ಕಾಲೇಜುಗಳ ಅತಿಥಿ ಉಪನ್ಯಾಸಕರ ಗೌರವ ಸಂಭಾವನೆ |
|---|---|---|
| ರೂ.10,000/- | ರೂ.10,500/- | ರೂ.12,000/- |

ಅತಿಥಿ ಶಿಕ್ಷಕರ/ಉಪನ್ಯಾಸಕರ ಗೌರವ ಸಂಭಾವನೆಯನ್ನು ಪರಿಷ್ಕರಿಸಲು ಆರ್ಥಿಕ ಇಲಾಖೆಗೆ ಪ್ರಸಾವನೆ ಸಲ್ಲಿಸಲಾಗಿತ್ತು. ಆದರೆ ಆರ್ಥಿಕ ಇಲಾಖೆಯು ಅತಿಥಿ ಶಿಕ್ಷಕರ/ಉಪನ್ಯಾಸಕರ ಗೌರವ ಸಂಭಾವನೆಯನ್ನು 2022ರಲ್ಲಿ ಪರಿಷ್ಕರಣೆ ಮಾಡಿರುವುದರಿಂದ ಮತ್ತೊಮ್ಮೆ ಪರಿಷ್ಕರಿಸಲು ಸಾಧ್ಯವಿಲ್ಲವೆಂದು ಹಿಂಬರಹ ನೀಡಿರುತ್ತದೆ.

ರಾಜ್ಯದ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆ ಹಾಗೂ ಪದವಿಪೂರ್ವ ಕಾಲೇಜುಗಳಲ್ಲಿ ತಾತ್ಕಾಲಿಕವಾಗಿ ನೇಮಕಗೊಂಡು ಕರ್ತವ್ಯ ನಿರ್ವಹಿಸುವ ಅತಿಥಿ ಶಿಕ್ಷಕರು/ ಉಪನ್ಯಾಸಕರಿಗೆ 2025-26ನೇ ಸಾಲಿನ ಆಯವ್ಯಯ ಭಾಷಣದಲ್ಲಿ ತಲಾ ರೂ.2,000/- ಗೌರವ ಸಂಭಾವನೆ ಹೆಚ್ಚಿಸಲು ಘೋಷಣೆ ಮಾಡಲಾಗಿದೆ.

**ಸಂಖ್ಯೆ: ಇಪಿ 154 ಎಸ್ಇಎಸ್ 2025**

(ಎಸ್ ಮಧುಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ
ಇಲಾಖಾ ಸಚಿವರು



54/SES/2025-SCD A-EP-Sec (Computer No. 1761839)
m eOffice by MADHU BANGARAPPA, MIN-PSE(MB), MINISTER, MINISTER-PRIMARY AND SECONDARY EDUCATION on 05/05/2025 04:2